ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಸರ್ಕಾರದ ವಿವಿಧ ವಸತಿ ಯೋಜನೆಯಲ್ಲಿ ಮಂಜೂರಾದ ಮನೆಗಳ & ನಿವೇಶನದ ಪ್ರಗತಿಯ ಬಗ್ಗೆ

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ(ನಾಮನಿರ್ದೇಶನ ಹೊಂದಿದವರು) –

1055 (1251) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ 3 ವರ್ಷಗಳಲ್ಲಿ ಸರ್ಕಾರದ ವಿವಿಧ ಗ್ರಾಮೀಣ ವಸತಿ ಯೋಜನೆಗಳಲ್ಲಿ ಸರ್ಕಾರದಿಂದ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು; ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು; ಭೌತಿಕವಾಗಿ ಪ್ರಗತಿಯಾದರೂ ಹಣ ಬಿಡುಗಡೆಯಾಗದಿರುವ ಪ್ರಕರಣಗಳೆಷ್ಟು; ಬಿಡುಗಡೆಯಾದ ಅನುದಾನವೆಷ್ಟು; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು; (ವರ್ಷವಾರು, ಯೋಜನೆವಾರು, ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಸರ್ಕಾರದಿಂದ ನಿವೇಶನ ರಹಿತರಿಗೆ ಹಂಚಲಾದ ನಿವೇಶನಗಳ ಸಂಖ್ಯೆ ಎಷ್ಟು; ಇವುಗಳ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನವೆಷ್ಟು; ಈ ನಿವೇಶನಗಳಲ್ಲಿ ನಿರ್ಮಿಸಲಾದ ಮನೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ನಿವೇಶನ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ರಸ್ತೆ ಬೀದಿ ದೀಪ ಮುಂತಾದವುಗಳಿಲ್ಲದೇ ಫಲಾನುಭವಿಗಳು ಮನೆ ನಿರ್ಮಿಸಲು ಹಿಂದೇಟು ಹಾಕುತ್ತಿರುವುದರಿಂದ ನಿವೇಶನ ಕಾಲೋನಿಗಳ ಸಮಗ್ರ ಅಭಿವೃದ್ಧಿಗೆ ಸರ್ಕಾರದ ಯೋಜನೆಗಳೇನು?